**ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560 003**

ಸಂಖ್ಯೆ: ಎ8/ಎಸ್.ಎಸ್.ಎಲ್.ಸಿ/ಅಧಿಸೂಚನೆ/2022/39/2021-22 ದಿನಾಂಕ: 25.01.2022

**:: ಸುತ್ತೋಲೆ ::**

ವಿಷಯ:- ಮಂಡಳಿಯಿಂದ ಶಾಲಾ ಸಂಕೇತ ಪಡೆಯದ ಹೊಸ ಶಾಲಾ/ಕಾಲೇಜುಗಳಿಂದ 2021-22ನೇ ಸಾಲಿಗೆ ಎಸ್ಎಸ್ಎಲ್‌ಸಿ ಪರೀಕ್ಷೆಗೆ ವಿದ್ಯಾರ್ಥಿಗಳನ್ನು ಆನ್‌ಲೈನ್ ಮುಖಾಂತರ ನೋಂದಾಯಿಸಲು ಮತ್ತು ಶುಲ್ಕ ಪಾವತಿಸಲು ದಿನಾಂಕ ವಿಸ್ತರಣೆ ಮಾಡಿರುವ ಕುರಿತು.

ಉಲ್ಲೇಖ:- 1. ಮಂಡಳಿ ಅಧಿಸೂಚನೆ ಸಂಖ್ಯೆ:ಎ8/ಎಸ್.ಎಸ್.ಎಲ್.ಸಿ/ಅಧಿಸೂಚನೆ/2022/39/2021-22 ದಿನಾಂಕ: 07.12.2021.

2. ಈ ಕಛೇರಿ ಸುತ್ತೋಲೆ ಸಮ ಸಂಖ್ಯೆ ದಿನಾಂಕ:23.12.2021 10.01.2022 ಮತ್ತು 17.01.2022.

* * * * * *

2021-22ನೇ ಸಾಲಿನ ಎಸ್.ಎಸ್.ಎಲ್.ಸಿ ಮುಖ್ಯ ಪರೀಕ್ಷೆಗೆ ರಾಜ್ಯದ ಸರ್ಕಾರಿ ಮತ್ತು ಸರ್ಕಾರದಿಂದ ಮಾನ್ಯತೆ ಪಡೆದ ಅನುದಾನಿತ, ಅನುದಾನರಹಿತ ಶಾಲಾ/ ಕಾಲೇಜುಗಳಿಂದ ಹಾಜರಾಗುವ ಅರ್ಹ ಶಾಲಾ ವಿದ್ಯಾರ್ಥಿಗಳು, ಖಾಸಗಿ ಅಭ್ಯರ್ಥಿಗಳು ಮತ್ತು ಪುನರಾವರ್ತಿತ ಅಭ್ಯರ್ಥಿಗಳ ಮಾಹಿತಿಯನ್ನು ಆನ್‌ಲೈನ್ ಮುಖಾಂತರ ನೋಂದಾಯಿಸಲು ದಿನಾಂಕ:25.01.2022ರವರೆಗೆ ಹಾಗೂ ಚಲನ್ ಮುದ್ರಿಸಿಕೊಂಡು ಶುಲ್ಕ ಪಾವತಿಸಲು ದಿನಾಂಕ:02.02.2022ರವರೆಗೆ ಅವಧಿ ವಿಸ್ತರಿಸಿ ದಿನಾಂಕ:17.01.2022ರಂದು ಸುತ್ತೋಲೆಯನ್ನು ಹೊರಡಿಸಲಾಗಿರುತ್ತದೆ. ಸದರಿ ಸುತ್ತೋಲೆಯಲ್ಲಿ ಸೂಚಿಸಿರುವಂತೆ ದಿನಾಂಕ:27.01.2022ರಿಂದ ಚಲನ್ ಮುದ್ರಿಸಿಕೊಂಡು ಅಂತಿಮ ದಿನಾಂಕದೊಳಗೆ ಶುಲ್ಕ ಪಾವತಿಸಿ, ದಿನಾಂಕ:10.02.2022ರೊಳಗೆ ಈಗಾಗಲೇ ಉಲ್ಲೇಖಿತ-2ರ ಸುತ್ತೋಲೆಗಳಲ್ಲಿ ಸೂಚಿಸಿರುವಂತೆ ಪ್ರಸ್ತಾವನೆಯನ್ನು ಮಂಡಳಿಗೆ ಸಲ್ಲಿಸಲು ಕ್ರಮವಹಿಸಲು ರಾಜ್ಯದ ಎಲ್ಲಾ ಪ್ರೌಢ ಶಾಲಾ ಮುಖ್ಯೋಪಾಧ್ಯಾಯರಿಗೆ ತಿಳಿಸಿದೆ. ಹಾಗೆಯೇ 2002 ಮತ್ತು ಅದರ ಹಿಂದಿನ ವರ್ಷಗಳಲ್ಲಿ ಅನುತ್ತೀರ್ಣರಾದ ಪುನರಾವರ್ತಿತ ಅಭ್ಯರ್ಥಿಗಳ (NSR & NSPR) ಪರೀಕ್ಷಾ ಶುಲ್ಕವನ್ನು ದಿನಾಂಕ:02.02.2022ರೊಳಗೆ ಪಾವತಿಸಿ ದಿನಾಂಕ:10.02.2022ರೊಳಗೆ ಮಂಡಳಿಗೆ ಪ್ರಸ್ತಾವನೆ ಸಲ್ಲಿಸಲು ತಿಳಿಸಿದೆ.

ಮುಂದುವರೆದು, ಹೊಸದಾಗಿ 10ನೇ ತರಗತಿ ಪ್ರಾರಂಭಿಸಿರುವ ಕೆಲವು ಶಾಲೆಗಳು ಮಂಡಳಿಯಿಂದ ಶಾಲಾ ಸಂಕೇತ ಪಡೆಯದಿರುವುದನ್ನು ಗಮನಿಸಲಾಗಿದ್ದು, ಇಂತಹ ಪ್ರೌಢ ಶಾಲೆಗಳಿಂದ ಹೊಸದಾಗಿ ಶಾಲಾ ಸಂಕೇತ ಪಡೆಯಲು ಮಂಡಳಿಗೆ ಪ್ರಸ್ತಾವನೆ ಬರುತ್ತಿವೆ. ಇಂತಹ ಶಾಲೆಗಳು ಮಂಡಳಿಯಿಂದ **ದಿನಾಂಕ:31.01.2022ರೊಳಗೆ** ಶಾಲಾ ಸಂಕೇತ ಪಡೆದು ಆನ್‌ಲೈನ್ ಮುಖಾಂತರ ವಿದ್ಯಾರ್ಥಿಗಳನ್ನು ನೋಂದಾಯಿಸಲು ಮತ್ತು ಶುಲ್ಕ ಪಾವತಿಸಲು ದಿನಾಂಕವನ್ನು ಕೆಳಕಂಡಂತೆ ವಿಸ್ತರಿಸಲಾಗಿದೆ.

**ಹೊಸದಾಗಿ ಶಾಲಾ ಸಂಕೇತ ಪಡೆಯುವ ಶಾಲೆಗಳಿಗೆ ಮಾತ್ರ ನೋಂದಣಿಗೆ ಮತ್ತು ಶುಲ್ಕ ಪಾವತಿಗೆ ದಿನಾಂಕ ವಿಸ್ತರಣೆ**

| ಕ್ರ ಸಂ | ವಿವರ | ವಿಸ್ತರಣೆ ಮಾಡಿದ ಕೊನೆಯ ದಿನಾಂಕ |
|---|---|---|
| 1 | ಮಂಡಳಿ ಜಾಲತಾಣದ ಶಾಲಾಲಾಗಿನ್ ಮೂಲಕ ವಿದ್ಯಾರ್ಥಿಗಳ ಮಾಹಿತಿಯನ್ನು ಅಪ್‌ಲೋಡ್ ಮಾಡಲು ನಿಗದಿಪಡಿಸಿದ **ಅಂತಿಮ** ದಿನಾಂಕ: | 07.02.2022 |
| 2 | ಮಂಡಳಿ ಜಾಲತಾಣದ ಶಾಲಾಲಾಗಿನ್ ಮೂಲಕ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕದ ಚಲನ್ ಮುದ್ರಿಸಿಕೊಂಡು ಬ್ಯಾಂಕ್‌ಗೆ ಜಮೆ ಮಾಡಲು ನಿಗದಿಪಡಿಸಿದ **ಅಂತಿಮ** ದಿನಾಂಕ | 11.02.2022 |

| | | |
|---|---|---|
| 3 | **ಕೆಳಕಂಡ ದಾಖಲೆಗಳನ್ನು ಮಂಡಳಿಗೆ ಸಲ್ಲಿಸಲು ನಿಗಧಿಪಡಿಸಿದ <u>ಅಂತಿಮ</u> ದಿನಾಂಕ**<br>• ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕವನ್ನೊಳಗೊಂಡಂತೆ ಶಾಲಾಲಾಗಿನ್‌ನಲ್ಲಿ ಸೃಜಿಸಲಾಗುವ ಚಲನ್ ಬಳಸಿಕೊಂಡು ಶುಲ್ಕ ಪಾವತಿಸಿದ ಮೂಲ ಚಲನ್<br>• ನಾಮಿನಲ್‌ರೋಲ್ ಮತ್ತು ಸಂಬಂಧಿಸಿದ ಇತರೆ ದಾಖಲೆಗಳು | 17.02.2022 |

ಮೇಲೆ ವಿವರಿಸಿರುವಂತೆ ಹೊಸದಾಗಿ ಶಾಲಾ ಸಂಕೇತ ಪಡೆಯುವ ಶಾಲೆಗಳಿಗೆ ಮಾತ್ರ ದಿನಾಂಕವನ್ನು ವಿಸ್ತರಿಸಲಾಗಿದೆ. ತಮ್ಮ ಜಿಲ್ಲಾ/ತಾಲ್ಲೂಕು ವ್ಯಾಪ್ತಿಯಲ್ಲಿ ಶಾಲಾ ಸಂಕೇತ ಪಡೆಯದ ಶಾಲಾ ಮುಖ್ಯೋಪಾಧ್ಯಾಯರ ಮತ್ತು ವಿದ್ಯಾರ್ಥಿಗಳ/ಪೋಷಕರ ಗಮನಕ್ಕೆ ತಂದು ಇದರ ಸದುಪಯೋಗವನ್ನು ಪಡೆದುಕೊಳ್ಳಲು ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರು / ಕ್ಷೇತ್ರ ಶಿಕ್ಷಣಾಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಈ ಮೂಲಕ ತಿಳಿಸಿದೆ.

(ಹೆಚ್.ಎನ್.ಗೋಪಾಲಕೃಷ್ಣ)
ನಿರ್ದೇಶಕರು, ಪರೀಕ್ಷೆಗಳು

<u>ಗೆ :-</u>

1. ರಾಜ್ಯದ ಎಲ್ಲಾ ಜಿಲ್ಲಾ ಉಪ ನಿರ್ದೇಶಕರು (ಆಡಳಿತ), ಸಾ ಶಿ ಇ ರವರು ಕೂಡಲೇ ಕ್ರಮವಹಿಸಲು ತಿಳಿಸಿದೆ.
2. ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.
3. ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಸರ್ಕಾರದಿಂದ ಮಾನ್ಯತೆ ಪಡೆದ ಅನುದಾನಿತ, ಅನುದಾನರಹಿತ ಶಾಲಾ/ ಕಾಲೇಜುಗಳ ಮುಖ್ಯ ಶಿಕ್ಷಕರುಗಳಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
4. ಮಂಡಳಿಯ ಎಲ್ಲಾ ಪರಿಶೀಲನಾ ಶಾಖೆಗಳ ಶಾಖಾಧಿಕಾರಿಗಳು/ಅಧೀಕ್ಷಕರುಗಳಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
5. ಶಾಖಾಧಿಕಾರಿಗಳು, ಬಿ, ಸಿ ಮತ್ತು ಲೆಕ್ಕಪತ್ರಶಾಖೆಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
6. ಶಾಖಾಧಿಕಾರಿಗಳು, ಗಣಕಶಾಖೆರವರು ಸದರಿ ಸುತ್ತೋಲೆಯನ್ನು ಮಂಡಳಿ ಜಾಲಾತಾಣ ಮತ್ತು ಶಾಲಾ ಲಾಗಿನ್ ನಲ್ಲಿ ಪ್ರಕಟಿಸುವುದು.
7. ಕಛೇರಿ ಪ್ರತಿ.

<u>ಪ್ರತಿಯನ್ನು :-</u>
ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರುರವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.